**Akashvani : Bangalore**
**Regional Bulletin In Kannada**
**ಆಕಾಶವಾಣಿ ಬೆಂಗಳೂರು**

**ಪ್ರದೇಶ ಸಮಾಚಾರ**

**20.05.2026 / 18.40 hrs**

---

ಮುಖ್ಯಾಂಶಗಳು

೧. ರಾಜ್ಯದಲ್ಲಿ ಆರು ಸಾವಿರ ಕೋಟಿ ರೂಪಾಯಿ ಹೂಡಿಕೆಗೆ ಏರೊಸ್ಪೇಸ್ ಕಂಪನಿ ಒಲವು - ಸಚಿವ ಎಂ.ಬಿ.ಪಾಟೀಲ್

೨. ರಾಜ್ಯದ ಹುಲಿ ಸಂರಕ್ಷಿತ ಪ್ರದೇಶ, ವನ್ಯಜೀವಿ ಧಾಮಗಳ ಸಫಾರಿಯಲ್ಲಿ ಸುರಕ್ಷಿತ ಬಸ್ ಬಳಕೆಗೆ ಅರಣ್ಯ ಸಚಿವ ಈಶ್ವರ್ ಬಿ.ಖಂಡ್ರೆ ಸೂಚನೆ

೩. ರಾಜ್ಯದ ಗ್ಯಾರಂಟಿ ಯೋಜನೆಗಳು ಇತಿಹಾಸ ಸೃಷ್ಟಿಸಿದೆ ; ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅಭಿಮತ

೪. ಜಿಬಿಎ ಯ ೫ ಪಾಲಿಕೆಗಳಲ್ಲಿ ಸೋಲುವ ಭಯದಿಂದಾಗಿ ಚುನಾವಣೆ ಮುಂದೂಡಿಕೆ - ಪ್ರತಿಪಕ್ಷ ನಾಯಕ ಆರ್.ಅಶೋಕ ಆರೋಪ

೫. ಬೆಂಗಳೂರು ಪೊಲೀಸರ ಕಾರ್ಯಾಚರಣೆ ; ೩೪ ಕೋಟಿ ರೂಪಾಯಿ ಮೌಲ್ಯದ ಮಾದಕವಸ್ತು ವಶ

---

ವೈಮಾಂತರಿಕ್ಷ ಹಾಗೂ ರಕ್ಷಣಾ ವಲಯದಲ್ಲಿ ಹೆಸರುವಾಸಿಯಾಗಿರುವ ಬೆಂಗಳೂರು ಮೂಲದ ಏರೋಸ್ಪೇಸ್ ಕಂಪನಿ ರಾಜ್ಯದಲ್ಲಿ ೬ ಸಾವಿರ ಕೋಟಿ ರೂಪಾಯಿ ಬಂಡವಾಳ ಹೂಡಿಕೆ ಮಾಡಲು ಆಸಕ್ತಿ ತೋರಿದೆ ಎಂದು ಕೈಗಾರಿಕಾ ಸಚಿವ ಎಂ.ಬಿ.ಪಾಟೀಲ್ ತಿಳಿಸಿದ್ದಾರೆ.

೨೦೦ ಎಕರೆ ಪ್ರದೇಶದಲ್ಲಿ ವೈಮಾಂತರಿಕ್ಷ, ರಕ್ಷಣಾ, ಸೆಮಿಕಂಡಕ್ಟರ್ ಹಾಗೂ ಕೃತಕ ಬುದ್ಧಿಮತ್ತೆ ನಾವೀನ್ಯತೆ ಕ್ಷೇತ್ರಗಳಲ್ಲಿ ಉತ್ಪಾದನೆ, ಪರೀಕ್ಷೆ ಮತ್ತು ನಿರ್ವಹಣೆಯ ಸಮಗ್ರ ಕೇಂದ್ರ ಸ್ಥಾಪಿಸುವುದು ಈ ಸಂಸ್ಥೆಯ ಪ್ರಮುಖ ಉದ್ದೇಶವಾಗಿದೆ ಎಂದು ಹೇಳಿದ್ದಾರೆ.

ಕಂಪನಿಯು ಹಂತ ಹಂತವಾಗಿ ಒಟ್ಟು ಆರು ಸಾವಿರ ಕೋಟಿ ರೂಪಾಯಿ ಬಂಡವಾಳ ಹೂಡಿಕೆ ಮಾಡಲಿದ್ದು, ಇದರಿಂದ ರಾಜ್ಯದಲ್ಲಿ ಪ್ರತ್ಯಕ್ಷವಾಗಿ ೨೦ ಸಾವಿರ ಹಾಗೂ ಪರೋಕ್ಷವಾಗಿ ೫೪ ಸಾವಿರ ಉದ್ಯೋಗ ಅವಕಾಶಗಳು ಸೃಷ್ಟಿಯಾಗಲಿದೆ ಎಂದು ಸ್ಪಷ್ಟಪಡಿಸಿದ್ದಾರೆ.

ಕ್ಷಿಪಣಿ ತಯಾರಿಕೆಗೆ ಪೂರಕ ಸೌಲಭ್ಯಗಳು, ರೇಡಾರ್ ಮತ್ತು ಸಂವೇದಕ ತಂತ್ರಜ್ಞಾನ, ಯುದ್ಧ ವಿಮಾನಗಳ ದುರಸ್ತಿ ಮತ್ತು ನಿರ್ವಹಣಾ ಸೌಲಭ್ಯಗಳು ಸೇರಿದಂತೆ ವೈಮಾಂತರಿಕ್ಷ ಹಾಗೂ ರಕ್ಷಣಾ ವಲಯದ ಮೂಲಸೌಕರ್ಯ ಅಭಿವೃದ್ಧಿಗೆ ಕಂಪನಿ ವಿಶೇಷ ಆದ್ಯತೆ ನೀಡಲಿದೆ ಎಂದು ಅವರು ಮಾಹಿತಿ ನೀಡಿದ್ದಾರೆ.

---

ರಾಜ್ಯದ ಐದು ಹುಲಿ ಸಂರಕ್ಷಿತ ಪ್ರದೇಶ ಹಾಗೂ ವನ್ಯಜೀವಿ ಧಾಮಗಳ ಸಫಾರಿಯಲ್ಲಿ ತೆರೆದ ಕ್ಯಾಂಪರ್ ಬದಲಿಗೆ ಸುರಕ್ಷಿತ ಬಸ್ ಬಳಕೆ ಮಾಡುವಂತೆ ಅರಣ್ಯ ಸಚಿವ ಈಶ್ವರ್ ಬಿ.ಖಂಡ್ರೆ ಸೂಚನೆ ನೀಡಿದ್ದಾರೆ.

ಸಫಾರಿಗಳಲ್ಲಿ ಪ್ರವಾಸಿಗರ ಸುರಕ್ಷತೆಗೆ ಹೆಚ್ಚಿನ ಗಮನ ಹರಿಸುವಂತೆ ವನ್ಯಜೀವಿ ಪರಿಪಾಲಕರಿಗೆ ನಿರ್ದೇಶನ ನೀಡಿದ್ದಾರೆ.

ಬಂಡೀಪುರ, ನಾಗರಹೊಳೆ, ಕಾಳಿ, ಬಿಳಿಗಿರಿರಂಗನಬೆಟ್ಟ ಮತ್ತು ಭದ್ರಾ ಹುಲಿ ಸಂರಕ್ಷಿತ ಪ್ರದೇಶ ಹಾಗೂ ಮಲೆ ಮಹದೇಶ್ವರ ಬೆಟ್ಟ, ದಾಂಡೇಲಿ, ಕೆ.ಗುಡಿ ಸೇರಿದಂತೆ ರಾಜ್ಯದ ವಿವಿಧ ವನ್ಯಜೀವಿಧಾಮಗಳಲ್ಲಿ ಸಫಾರಿ ನಡೆಯುತ್ತಿದ್ದು, ದೇಶ ವಿದೇಶಗಳಿಂದಲೂ ಪ್ರವಾಸಿಗರು, ಇಲ್ಲಿಗೆ ಆಗಮಿಸುತ್ತಾರೆ. ಅನಾಹುತ ಸಂಭವಿಸುವ ಮೊದಲೇ ಎಚ್ಚೆತ್ತುಕೊಳ್ಳುವ ಅಗತ್ಯವಿದೆ ಎಂದು ಸೂಚನೆಯಲ್ಲಿ ತಿಳಿಸಿದ್ದಾರೆ.

ಯಾವುದೇ ಪ್ರವಾಸಿಗರು ಅರಣ್ಯದೊಳಗೆ ಇಳಿಯಲು ಅವಕಾಶ ನೀಡದಂತೆ ಹಾಗೂ ಪ್ರತಿ ಸಫಾರಿ ವಾಹನದಲ್ಲಿ ಪ್ರಥಮ ಚಿಕಿತ್ಸೆಯ ಕಿಟ್ ಹಾಗೂ ಸಫಾರಿ ಕೇಂದ್ರಗಳಿಗೆ ಸಮೀಪದಲ್ಲಿ ಆಂಬುಲೆನ್ಸ್ ವಾಹನ ಇರುವುದನ್ನು ಖಾತ್ರಿಪಡಿಸಿಕೊಳ್ಳುವಂತೆಯೂ ಸೂಚನೆ ನೀಡಿದ್ದಾರೆ.

---

ರಾಜ್ಯದ ಗ್ಯಾರಂಟಿ ಯೋಜನೆಗಳು ಇತಿಹಾಸ ಸೃಷ್ಟಿಸಿದೆ ಎಂದು ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ತಿಳಿಸಿದ್ದಾರೆ.

ಬೆಂಗಳೂರಿನಲ್ಲಿ ಇಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಕಳೆದ ಮೂರು ವರ್ಷಗಳಲ್ಲಿ ಪಂಚ ಗ್ಯಾರಂಟಿಗೆ ೧.೩೪ ಲಕ್ಷ ಕೋಟಿ ರೂಪಾಯಿ ವೆಚ್ಚ ಮಾಡಲಾಗಿದೆ ಎಂದು ಹೇಳಿದ್ದಾರೆ.

ಜಿಬಿಎ ಚುನಾವಣೆ ಕುರಿತು ಸುಪ್ರೀಂಕೋರ್ಟ್ ನಿರ್ದೇಶನದ ಕುರಿತು ಪ್ರತಿಕ್ರಿಯಿಸಿದ ಅವರು, ಆಗಸ್ಟ್ ೩೦ರೊಳಗೆ ಚುನಾವಣೆ ನಡೆಸಲು ನ್ಯಾಯಾಲಯ ಸೂಚನೆ ನೀಡಿದೆ. ಚುನಾವಣಾ ಅಧಿಕಾರಿಗಳು, ಅಧಿಕಾರಿಗಳ ಜೊತೆ ಚರ್ಚೆ ನಡೆಸಿ ಚುನಾವಣೆ ನಡೆಸಲಿದ್ದಾರೆ ಎಂದು ಮಾಹಿತಿ ನೀಡಿದ್ದಾರೆ.

ಇದೇ ವೇಳೆ, ಬೌರಿಂಗ್ ಆಸ್ಪತ್ರೆ ಕಾಂಪೌಂಡ್ ಕುಸಿಯಲು ಹೆಚ್ಚಿನ ಮಣ್ಣು ಸುರಿದಿರುವುದೇ ಕಾರಣ ಎಂದು ಉಪಮುಖ್ಯಮಂತ್ರಿ ಮಾಹಿತಿ ನೀಡಿದ್ದಾರೆ.

---

ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವ ಎಸ್.ಮಧುಬಂಗಾರಪ್ಪ ನೇತೃತ್ವದಲ್ಲಿ ಶಿವಮೊಗ್ಗ ವಕೀಲರ ಸಂಘದ ಪದಾಧಿಕಾರಿಗಳ ನಿಯೋಗವು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರನ್ನು ಇಂದು ಭೇಟಿ ಮಾಡಿತು.

ಈ ವೇಳೆ ಶಿವಮೊಗ್ಗಕ್ಕೆ ಹೈಕೋರ್ಟ್ ಸಂಚಾರಿ ಪೀಠದ ಅಗತ್ಯತೆ ಕುರಿತು ಚರ್ಚಿಸಿ ಮನವಿ ಸಲ್ಲಿಸಿತು. ಈ ಸಂದರ್ಭದಲ್ಲಿ ಮುಖ್ಯಮಂತ್ರಿಗಳ ಕಾನೂನು ಸಲಹೆಗಾರ ಎ.ಎಸ್.ಪೊನ್ನಣ್ಣ ಉಪಸ್ಥಿತರಿದ್ದರು.

---

ಗ್ರೇಟರ್ ಬೆಂಗಳೂರು ವ್ಯಾಪ್ತಿಯಲ್ಲಿನ ೫ ಪಾಲಿಕೆಗಳಲ್ಲಿ ಸೋಲುವ ಭಯದಿಂದಾಗಿ ಚುನಾವಣೆಯನ್ನು ಪದೇ ಪದೇ ಮುಂದೂಡಲಾಗುತ್ತಿದೆ ಎಂದು ವಿರೋಧ ಪಕ್ಷದ ನಾಯಕ ಆರ್. ಅಶೋಕ ಆರೋಪಿಸಿದ್ದಾರೆ.

ಬೆಂಗಳೂನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಜನಗಣತಿ ಮತ್ತು ಮತದಾರರ ಪಟ್ಟಿ ತೀವ್ರ ಪರಿಷ್ಕರಣೆ ಕಾರಣದಿಂದ, ಸಿಬ್ಬಂದಿ ಕೊರತೆ ಇದೆ ಎಂಬ ನೆಪ ಹೇಳಿ, ಚುನಾವಣೆ ಮುಂದೂಡಲಾಗುತ್ತಿದೆ. ಪಕ್ಷದಲ್ಲಿ ಆಂತರಿಕವಾಗಿ ನಡೆದ ಸಮೀಕ್ಷೆಯಿಂದ ಕಾಂಗ್ರೆಸ್ ಪಕ್ಷ ಸೋಲಲಿದೆ ಎಂಬ ವರದಿಯಿದೆ ಎಂದು ತಿಳಿಸಿದ್ದಾರೆ.

ಬಿಡದಿಯ ಬಳಿ, ಸಂಪದ್ಭರಿತ ಕೃಷಿ ಭೂಮಿಯನ್ನು ಸ್ವಾಧೀನಪಡಿಸಿಕೊಳ್ಳಲು ಮುಂದಾಗಿರುವುದು ಸರಿಯಲ್ಲ. ಉಪ ನಗರ ನಿರ್ಮಾಣ ಯೋಜನೆಯಲ್ಲಿ, ಕಮಿಷನ್ ಪಡೆಯುವ ಸಲುವಾಗಿ, ಬಲವಂತದ ಭೂ ಸ್ವಾಧೀನ ಮಾಡಲಾಗುತ್ತಿದೆ ಎಂದು ದೂರಿದ್ದಾರೆ.

---

ಬೆಂಗಳೂರಿನ ಹೆಬ್ಬಾಳ ಪೊಲೀಸರು ದೆಹಲಿ ಮೂಲದ ಮಾದಕವಸ್ತು ಜಾಲ ಭೇದಿಸಿದ್ದು, ೩೪ ಕೋಟಿ ರೂಪಾಯಿ ಮೌಲ್ಯದ ಮಾದಕವಸ್ತುಗಳನ್ನು ಜಪ್ತಿ ಮಾಡಿದ್ದಾರೆ. ಪ್ರಕರಣಕ್ಕೆ ಸಂಬಂಧಿಸಿದಂತೆ ಎಂಟು ಮಂದಿ ಆರೋಪಿಗಳನ್ನು ಬಂಧಿಸಿದ್ದಾರೆ. ಯಶವಂತಪುರ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ದಾಖಲಾದ ಪ್ರಕರಣಗಳ ಪರಿಶೀಲನೆ ವೇಳೆ ದೆಹಲಿಯಿಂದ ಮಾದಕವಸ್ತುಗಳು ಬರುತ್ತಿರುವುದರ ಬಗ್ಗೆ ಪೊಲೀಸರಿಗೆ ಮಾಹಿತಿ ಸಿಕ್ಕಿತ್ತು.

ಈ ಜಾಲ ಭೇದಿಸಲು ಹೆಬ್ಬಾಳ ಮತ್ತು ಉತ್ತರ ವಿಭಾಗದ ಸುಮಾರು ೪೦ ಪೊಲೀಸರನ್ನು ಒಳಗೊಂಡ ತಂಡ ರಚಿಸಲಾಗಿತ್ತು. ಕಳೆದ ಒಂದು ತಿಂಗಳಿನಿಂದ ಆರೋಪಿಗಳ ಚಲನ-ವಲನ ಬೆನ್ನತ್ತಿದ ಪೊಲೀಸರು ಮಾದಕವಸ್ತುಗಳನ್ನು ಜಪ್ತಿ ಮಾಡಿದ್ದಾರೆ.

---

ಆಕಾಶವಾಣಿ ೯೦ ವರ್ಷಗಳನ್ನು ಪೂರೈಸಿರುವ ಸಂದರ್ಭದಲ್ಲಿ ಮೈಸೂರು ಆಕಾಶವಾಣಿಯು ಮಂಡ್ಯದ ಕರ್ನಾಟಕ ಸಂಘದ ಸಹಯೋಗದಲ್ಲಿ ನಾಳೆ ಮುಂಗಾರು ಮಳೆ-ಇಳೆ ಕಾವ್ಯಧಾರೆ ಮತ್ತು ಬಾನುಲಿ ಬರವಣಿಗೆ ಕಾರ್ಯಾಗಾರ ಏರ್ಪಡಿಸಿದೆ.

ಈ ಕಾರ್ಯಕ್ರಮವು ಮಂಡ್ಯದ ಕೆ.ವಿಶಂಕರೇಗೌಡ ಶತಮಾನೋತ್ಸವ ಸಭಾಂಗಣದಲ್ಲಿ ನಡೆಯಲಿದೆ. ಮಂಡ್ಯ, ಚಾಮರಾಜನಗರ ಮತ್ತು ಮೈಸೂರು ಜಿಲ್ಲೆಯಿಂದ ಆಯ್ದ ೨೦ಕ್ಕೂ ಹೆಚ್ಚು ಕವಿಗಳು ಸ್ವರಚಿತ ಕವನಗಳನ್ನು ವಾಚನ ಮಾಡಲಿದ್ದಾರೆ.

ಆಕಾಶವಾಣಿ ಕಾರ್ಯಕ್ರಮಗಳ ಬರವಣಿಗೆ ಕೌಶಲ್ಯಗಳನ್ನು ಕುರಿತಂತೆ ಮೈಸೂರು ಆಕಾಶವಾಣಿಯ ಅಧಿಕಾರಿಗಳು ಮಾತನಾಡಲಿದ್ದಾರೆ. ಇದರಲ್ಲಿ ಭಾಗವಹಿಸಲು ಸಾಹಿತ್ಯಾಸಕ್ತರು ಮತ್ತು ಸಾರ್ವಜನಿಕರಿಗೆ ಮುಕ್ತ ಅವಕಾಶವಿದೆ.

---

ನಿಮ್ಹಾನ್ಸ್‌ನ ಎನ್‌ಸ್ಪೈಟ್ ಮತ್ತು ಹಿಮಾಲಯ ವೆಲ್‌ನೆಸ್ ಕಂಪನಿ ಸಮುದಾಯ ಆಧಾರಿತ ಆತ್ಮಹತ್ಯೆ ತಡೆಗಟ್ಟುವಿಕೆ ಉಪಕ್ರಮಗಳ ವಿಸ್ತರಣೆಯನ್ನು ಪ್ರಕಟಿಸಿದೆ. ಸುರಕ್ಷಾ ಯೋಜನೆಯನ್ನು ರಾಮನಗರ ಜಿಲ್ಲೆಗೆ ವಿಸ್ತರಿಸುವುದಾಗಿ ಘೋಷಿಸಿದೆ.

೨೦೨೩ರಲ್ಲಿ ಆರಂಭಿಸಲಾದ ಪ್ರಾಜೆಕ್ಟ್ ಸುರಕ್ಷಾ ಭಾರತದ ರಾಷ್ಟ್ರೀಯ ಆತ್ಮಹತ್ಯೆ ತಡೆಗಟ್ಟುವಿಕೆ ಕಾರ್ಯತಂತ್ರ ಮತ್ತು ವಿಶ್ವ ಆರೋಗ್ಯ ಸಂಸ್ಥೆಯ ಆತ್ಮಹತ್ಯೆ ತಡೆಗಟ್ಟುವ ಉಪಕ್ರಮ ಲೈವ್‌ಲೈಫ್ ಚೌಕಟ್ಟಿಗೆ ಹೊಂದಿಕೆಯಾಗುವ ಸಮಗ್ರ ಸಮುದಾಯ ಆಧಾರಿತ ಮಾದರಿಯಾಗಿ ವಿನ್ಯಾಸಗೊಳಿಸಲಾಗಿದೆ.

ರಾಮನಗರ ಜಿಲ್ಲೆಯ ಚನ್ನಪಟ್ಟಣ ತಾಲೂಕಿನಲ್ಲಿ ಪ್ರಾಯೋಗಿಕವಾಗಿ ಕಾರ್ಯ ನಿರ್ವಹಿಸುತ್ತಿರುವ ಈ ಯೋಜನೆಯು ೨೦೨೬ರಲ್ಲಿ ೩೨ ಪಂಚಾಯತ್‌ಗಳಲ್ಲಿ ಮೂರು ವರ್ಷಗಳ ಕಾರ್ಯಾಚರಣೆಯನ್ನು ಯಶಸ್ವಿಯಾಗಿ ಪೂರ್ಣಗೊಳಿಸಿದೆ.

---

ಭಾರತದ ನವರತ್ನ ಕಂಪನಿಗಳಲ್ಲೊಂದಾದ ಭಾರತ್ ಎಲೆಕ್ಟ್ರಾನಿಕ್ಸ್ ಲಿಮಿಟೆಡ್-ಬಿಇಎಲ್ ೨೦೨೫-೨೬ನೇ ಹಣಕಾಸು ವರ್ಷದಲ್ಲಿ ವಿವಿಧ ಮೂಲಗಳಿಂದ ಶೇಕಡ ೧೬ರಷ್ಟು ಬೆಳವಣಿಗೆ ದಾಖಲಿಸಿದೆ.

ಪ್ರಸಕ್ತ ಹಣಕಾಸು ವರ್ಷದಲ್ಲಿ ೨೭ ಸಾವಿರದ ೪೭೯.೬೩ ಕೋಟಿಗಳ ಆದಾಯಗಳಿಸಿದೆ. ಪ್ರಸಕ್ತ ವರ್ಷದ ೪ನೇ ತ್ರೈಮಾಸಿಕದಲ್ಲಿ ೧೦ ಸಾವಿರದ ೧೭೭.೧೭ ಕೋಟಿ ಆದಾಯ ಗಳಿಸಿದೆ ಎಂದು ಭಾರತ ಎಲೆಕ್ಟ್ರಾನಿಕ್ಸ್ ಲಿಮಿಟೆಡ್ ಪ್ರಕಟಣೆಯಲ್ಲಿ ದಾಖಲಿಸಿದೆ.

---

ಬೆಂಗಳೂರಿನ ಹೊರವಲಯದಲ್ಲಿರುವ ಆನೆಕಲ್ ತಾಲೂಕಿನ ಇಂಡ್ಲವಾಡಿ ಬಳಿಯ ಸೂರ್ಯನಗರ ನಾಲ್ಕನೇ ಹಂತದಲ್ಲಿ ಉದ್ದೇಶಿತ ಅಂತಾರಾಷ್ಟ್ರೀಯ ಕ್ರೀಡಾಂಗಣ ನಿರ್ಮಾಣಕ್ಕೆ ಇದೇ ೧೩ರಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಶಿಲಾನ್ಯಾಸ ನೆರವೇರಿಸಲಿದ್ದಾರೆ.

ಈ ಹಿನ್ನೆಲೆಯಲ್ಲಿ ವಸತಿ ಸಚಿವ ಜಮೀರ್ ಅಹಮ್ಮದ್ ಹಾಗೂ ಕೆ.ಎಚ್.ಬಿ. ಅಧ್ಯಕ್ಷ ಶಿವಲಿಂಗೇಗೌಡ ಇಂದು ಭೇಟಿ ನೀಡಿ, ವ್ಯವಸ್ಥೆಗಳನ್ನು ಪರಿಶೀಲಿಸಿದರು. ಪ್ರಸ್ತಾವಿತ ಅಂತಾರಾಷ್ಟ್ರೀಯ ಕ್ರೀಡಾಂಗಣವನ್ನು ೭೫ ಎಕರೆ ಪ್ರದೇಶದಲ್ಲಿ ಸುಮಾರು ೧ ಸಾವಿರದ ೩೫೦ ಕೋಟಿ ರೂಪಾಯಿ ವೆಚ್ಚದಲ್ಲಿ ಅಭಿವೃದ್ಧಿಪಡಿಸಲಾಗುತ್ತಿದೆ.

ಈ ಕ್ರೀಡಾಂಗಣ ೮೦ ಸಾವಿರ ಪ್ರೇಕ್ಷಕರ ಆಸನ ಸಾಮರ್ಥ್ಯದೊಂದಿಗೆ ಕಾರ್ಯ ನಿರ್ವಹಿಸಲಿದೆ.

---

ತೋಟಗಾರಿಕಾ ವಿಜ್ಞಾನಗಳ ವಿಶ್ವವಿದ್ಯಾಲಯ, ಬಾಗಲಕೋಟೆ ಮತ್ತು ಅಖಿಲ ಭಾರತ ಸಮನ್ವಯ ಸಂಶೋಧನಾ ಯೋಜನೆ ಜಂಟಿಯಾಗಿ ೧೬ ನೇ ವಾರ್ಷಿಕ ಸಾಮಾನ್ಯ ಸಭೆಯನ್ನು  ನಾಳೆಯಿಂದ ಇದೇ ೧೩ರವರಗೆ ಬೆಂಗಳೂರಿನ ತೋಟಗಾರಿಕೆ ವಿಶ್ವವಿದ್ಯಾಲಯದ ತೋಟಗಾರಿಕಾ ಮಹಾವಿದ್ಯಾಲಯದಲ್ಲಿ ಆಯೋಜಿಸಿದೆ.

ಸಾಮಾನ್ಯ ಸಭೆಯಲ್ಲಿ ಭಾರತದ ವಿವಿಧ ಕೃಷಿ-ಹವಾಮಾನ ವಲಯಗಳಿಗೆ ಸೂಕ್ತವಾದ ಗಡ್ಡೆ ಗೆಣಸು ಬೆಳೆಗಳ ತಂತ್ರಜ್ಞಾನ, ಮೌಲ್ಯವರ್ಧನೆಗೆ ಸಂಬಂಧಿಸಿದ ಸಮಾಲೋಚನೆಗಳು ನಡೆಯಲಿವೆ.

ಗಡ್ಡೆ ಗೆಣಸು ಬೆಳೆಗಳ ತಳಿಯ ಸಂಪನ್ಮೂಲಗಳು, ತಳಿ ಅಭಿವೃದ್ಧಿ ಮತ್ತು ಸುಧಾರಿತ ಬೆಳೆ ನಿರ್ವಹಣಾ ಪದ್ಧತಿಗಳು ಇತ್ಯಾದಿ ಚರ್ಚೆಯ ಪ್ರಮುಖ ವಿಷಯಗಳಾಗಿವೆ. ದೇಶದ ವಿವಿಧ ಭಾಗಗಳಿಂದ ಸುಮಾರು ೬೦ ವಿಜ್ಞಾನಿಗಳು ವಾರ್ಷಿಕ ಸಾಮಾನ್ಯ ಸಭೆಯಲ್ಲಿ ಭಾಗವಹಿಸಲಿದ್ದಾರೆ ಎಂದು  ತೋಟಗಾರಿಕೆ ಮಹಾವಿದ್ಯಾಲಯದ ಡೀನ್  ಡಾ.ರಾಮಚಂದ್ರ ನಾಯ್ಕ  ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

---

ಸಂಕ್ಷಿಪ್ತ ಸುದ್ದಿಗಳು

೧. ಕರ್ನಾಟಕ ವಾಯುಮಾಲಿನ್ಯ ನಿಯಂತ್ರಣ ಮಂಡಳಿ ವತಿಯಿಂದ ಮುಖ್ಯಮಂತ್ರಿಗಳ ಪರಿಹಾರ ನಿಧಿಗೆ ನೀಡಲಾದ ೬ ಕೋಟಿ ರೂಪಾಯಿಗಳ ಚೆಕ್ಕನ್ನು ಮಂಡಳಿಯ ಅಧ್ಯಕ್ಷ ಶಾಸಕ ನರೇಂದ್ರ ಸ್ವಾಮಿ, ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ ಹಸ್ತಾಂತರಿಸಿದರು.

__________ ಮುಕ್ತಾಯ ___________